ಕರ್ನಾಟಕ ಸರಕಾರ

# ಜಿಲ್ಲಾ ಪಂಚಾಯತ್, ಕೊಪ್ಪಳ

ಸಂಖ್ಯೆ : ಜಿಪಂಕೊ/ಗ್ರಾಪಂ/ಗ್ರಂ.ಮೇ.ಹು.ನೇ/ಸಿ.ಆರ್. 6118/2023-24 ದಿನಾಂಕ:29-02-2024. 01-03-

## :: ಅಧಿಸೂಚನೆ ::

**ವಿಷಯ:** ಕೊಪ್ಪಳ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ 21 ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡುವ ಕುರಿತು.

**ಉಲ್ಲೇಖ:1** ಸರ್ಕಾರದ ಅಧಿಸೂಚನೆ ಸಂಖ್ಯೆ:RDPR 156 GPA 2022 (ಇ) ದಿನಾಂಕ:14-11-2022.

**2** ಸರ್ಕಾರದ ಸುತ್ತೋಲೆ ಸಂಖ್ಯೆ: ಕಪಂರಾಅ/ಅಭಿವೃದ್ಧಿ/652/2022 ದಿನಾಂಕ: 28-12-2022.

**3** ಸರ್ಕಾರದ ಆದೇಶ ಸಂಖ್ಯೆ: ಕೆಪಿಆರ್‌ಸಿ-DEV/544/2021 ದಿ:19-12-2022.

**4** ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 149 ಎಸ್.ಆರ್.ಆರ್. 2020 ದಿನಾಂಕ: 25-09-2020.

**5** ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 01 ಸಹಿಮ 2022, ಬೆಂಗಳೂರು ದಿನಾಂಕ: 28-12-2022.

**6** ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸಹಿಮ 2023 ದಿ:08-03-2023.

**7** ಸರ್ಕಾರದ ಆದೇಶ ಸಂಖ್ಯೆ: RDPR 425 ಜಿಪಅ 2023 ದಿ:16-08-2023.

**8** ಈ ಕಾರ್ಯಾಲಯದ ಅಧಿಸೂಚನೆ ದಿನಾಂಕ: 04-09-2023.

***_***

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು-2022 ನ್ನು ಉಲ್ಲೇಖ (1) ರಂತೆ ಜಾರಿಗೊಳಿಸಲಾಗಿದೆ. ಉಲ್ಲೇಖ (1)ರ ಅಧಿಸೂಚನೆಯಲ್ಲಿರುವಂತೆ ಜಾರಿಯಲ್ಲಿರುವ ನಿಯಮಗಳಡಿಯಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಉಲ್ಲೇಖ (2) ರಲ್ಲಿ ನಿರ್ದೇಶಿಸಲಾಗಿದೆ.

ಉಲ್ಲೇಖ (3)ರ ಆದೇಶದಂತೆ ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ 21 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಿದ್ದು ಇರುತ್ತದೆ. ಉಲ್ಲೇಖ (8) ರಲ್ಲಿ ಈಗಾಗಲೇ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅದರಲ್ಲಿ ರೋಷ್ಟರ್ ಬಿಂದು ಹಾಗೂ ಸಮತಲ ಮೀಸಲಾತಿಗಳನ್ನು ಸರಿಯಾಗಿ ಗುರುತಿಸದೇ ಇರುವುದರಿಂದ ಅದನ್ನು ಹಿಂಪಡೆಯಲಾಗಿದೆ.

ಕಾರಣ ಸದರಿ ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಪ್ರಸ್ತುತ ಖಾಲಿ ಇರುವ ಪ್ರತಿ ಗ್ರಾಮ ಪಂಚಾಯತಿಗೆ ಒಂದರಂತೆ ಒಟ್ಟು 21 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳನ್ನು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಪುನಃ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಕೊಪ್ಪಳ ಜಿಲ್ಲೆಯ ವೆಬ್ ಸೈಟ್ ನಲ್ಲಿ www.koppal.nic.in ರಲ್ಲಿ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದೃಢೀಕರಿಸಿದ ದಾಖಲೆಗಳೊಂದಿಗೆ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಉಪ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್ ಕೊಪ್ಪಳ ಇಲ್ಲಿಗೆ ರಜೆ ದಿನಗಳನ್ನು ಹೊರತುಪಡಿಸಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ:03-04-2024 ಸಾಯಂಕಾಲ 5.30 ರೊಳಗಡೆ ಸಲ್ಲಿಸತಕ್ಕದ್ದು.

ಪ್ರತಿನೊ...

**ಖಾಲಿ ಇರುವ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಮೀಸಲಾತಿ ವಿವರ.**

| ಕ್ರ.ಸಂ. | ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಹೆಸರು (ರೋಸ್ಟರ್ ಆಧಾರ) | ತಾಲ್ಲೂಕು | ಮೀಸಲಾತಿ ವಿವರ | | |
|---|---|---|---|---|---|
| | | | ಮೀಸಲಾತಿ ಬಿಂದು | ಲಂಬ (Vertical) | ಅಡ್ಡ (Horizontal) |
| 01 | ಅಂಟರಠಾಣ | ಕುಷ್ಟಗಿ | 01 | ಪ.ಜಾತಿ | ಇತರೆ |
| 02 | ಕಲಕೇರಿ | ಕೊಪ್ಪಳ | 02 | ಸಾ.ಅ | ಇತರೆ |
| 03 | ಕೇಸೂರು | ಕುಷ್ಟಗಿ | 03 | ಪ.ಪಂ. | ಇತರೆ |
| 04 | ಗುಮಗೇರಾ | ಕುಷ್ಟಗಿ | 04 | ಸಾ.ಅ | ಮ.ಅ |
| 05 | ಜಂಗಮರಕಲ್ಗುಡಿ | ಗಂಗಾವತಿ | 05 | ಪ್ರ-1 | ಇತರೆ |
| 06 | ಜೀರಾಳ | ಕನಕಗಿರಿ | 06 | ಸಾ.ಅ | ಗ್ರಾ.ಅ |
| 07 | ತುಮರಿಕೊಪ್ಪ | ಕುಷ್ಟಗಿ | 07 | ಪ್ರ-II (ಎ) | ಇತರೆ |
| 08 | ತುಮ್ಮರಗುದ್ದಿ | ಯಲಬುರ್ಗಾ | 08 | ಸಾ.ಅ | ಅಂ.ವಿ |
| 09 | ನೆಲಜೇರಿ | ಕುಕನೂರು | 09 | ಪ.ಜಾತಿ | ಮ.ಅ |
| 10 | ಬಸರಿಹಾಳ | ಕನಕಗಿರಿ | 10 | ಸಾ.ಅ | ಮ.ಅ |
| 11 | ಬಿಳೇಕಲ್ | ಕುಷ್ಟಗಿ | 11 | ಪ್ರ-II (ಬಿ) | ಇತರೆ |
| 12 | ಬೋದೂರು | ಯಲಬುರ್ಗಾ | 12 | ಸಾ.ಅ | ಗ್ರಾ.ಅ |
| 13 | ಮುನಿರಾಬಾದ್ ಡ್ಯಾಂ | ಕೊಪ್ಪಳ | 13 | ಪ್ರ-II (ಎ) | ಮ.ಅ |
| 14 | ಮೈಲಾಪೂರ | ಕಾರಟಗಿ | 14 | ಸಾ.ಅ | ಇತರೆ |
| 15 | ವಣಬಳ್ಳಾರಿ | ಕೊಪ್ಪಳ | 15 | ಪ.ಜಾತಿ | ಗ್ರಾ.ಅ |
| 16 | ಶಿರಗುಂಪಿ | ಕುಷ್ಟಗಿ | 16 | ಸಾ.ಅ | ಮ.ಅ |
| 17 | ಸಣಾಪೂರ | ಗಂಗಾವತಿ | 17 | ಪ್ರ-III (ಎ) | ಇತರೆ |
| 18 | ಸಂಕನೂರು | ಯಲಬುರ್ಗಾ | 18 | ಪ.ಪಂ | ಮ.ಅ |
| 19 | ಹಾಬಲಕಟ್ಟಿ | ಕುಷ್ಟಗಿ | 19 | ಪ್ರ-III (ಬಿ) | ಇತರೆ |
| 20 | ಹಾಲವರ್ತಿ | ಕೊಪ್ಪಳ | 20 | ಸಾ.ಅ | ಗ್ರಾ.ಅ |
| 21 | ಹಿರೇನಂದಿಹಾಳ | ಕುಷ್ಟಗಿ | 21 | ಪ್ರ-II (ಎ) | ಗ್ರಾ.ಅ |

1) **ಶೈಕ್ಷಣಿಕ ವಿದ್ಯಾರ್ಹತೆ :**

- ದ್ವಿತೀಯ ಪದವಿ ಪೂರ್ವ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ 03 ತಿಂಗಳು ಕಂಪ್ಯೂಟರ್ ಕೋರ್ಸನಲ್ಲಿ ಉತ್ತೀರ್ಣರಾಗಿರಬೇಕು.
- ಒಂದು ವೇಳೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.
- ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.
- ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ತತ್ಸಮಾನ ವಿದ್ಯಾರ್ಹತೆ ಹೊಂದಿದಲ್ಲಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಪುತಿನೊ...

2) **ವಾಸಸ್ಥಳ :**

ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು. ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿ ಲಭ್ಯತೆ ಇಲ್ಲದೆ ಇದ್ದಲ್ಲಿ ಆಯಾ ತಾಲೂಕು ವ್ಯಾಪ್ತಿಯಲ್ಲಿನ ಬೇರೆ ಗ್ರಾಮ ಪಂಚಾಯತಿಯ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು. ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವಾದ ತಹಶೀಲ್ದಾರ ಇವರಿಂದ ವಾಸಸ್ಥಳ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

3) **ವಯೋಮಿತಿ :**

- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:03-04-2024ಕ್ಕೆ ಅಭ್ಯರ್ಥಿಯು 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯು ಈ ಕೆಳಕಂಡಂತೆ ಇರತಕ್ಕದ್ದು.

| | | |
|---|---|---|
| ಎ | ಸಾಮಾನ್ಯ ವರ್ಗ | 18 ರಿಂದ 35 ವರ್ಷ |
| ಬಿ | 2ಎ, 2ಬಿ, 3ಎ, 3ಬಿ | 18 ರಿಂದ 38 ವರ್ಷ |
| ಸಿ | ಪ.ಜಾತಿ / ಪ.ಪಂ / ಪ್ರವರ್ಗ-1 | 18 ರಿಂದ 40 ವರ್ಷ |

ಮೇಲ್ಕಂಡ ಗರಿಷ್ಠ ವಯೋಮಿತಿಯಲ್ಲದೆ ಕರ್ನಾಟಕ ನಾಗರೀಕಾ ಸೇವಾ (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ಧಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

- **ಮಾಜಿ ಸೈನಿಕ :** ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವವೋ ಅಷ್ಟು ವರ್ಷಗಳನ್ನು ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **ವಿಧವೆಯಾಗಿದ್ದಲ್ಲಿ :** ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಂದು ಹಾಗೂ ಮರು ಮಧುವೆಯಾಗಿರುವುದಿಲ್ಲವೆಂದು ಪ್ರಮಾಣ ಪತ್ರ ಸಲ್ಲಿಸಿದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **ಅಂಗವಿಕಲ :** ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ಅಂಗವಿಕಲ ಅಭ್ಯರ್ಥಿಯೆಂದು ಪಡೆದ ಪ್ರಮಾಣ ಪತ್ರ ಸಲ್ಲಿಸಿದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **National Cadet Corps** ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ **Cadet** ಪರಿವೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
- **ಯೋಜನಾ ನಿರಾಶ್ರಿತರು :** ಸರ್ಕಾರ ಆದೇಶ ಸಂಖ್ಯೆ: ಸಿಆಸುಇ 23 ಸೇನೆನಿ 99 ದಿನಾಂಕ: 23/11/2000 ರನ್ವಯ ಯೋಜನೆಗಳಿಂದ ನಿರ್ವಶಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ಕೊನೆಯ ದಿನಾಂಕದೊಳಗಾಗಿ ಪ್ರಮಾಣ ಪತ್ರವನ್ನು ಪಡೆಯುವುದು.
- **ತೃತೀಯ ಲಿಂಗ :** ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಲಗತ್ತಿಸುವುದು.
- **ಜೀತ ವಿಮುಕ್ತ :** ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಕೊನೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪಡೆದು ಸಲ್ಲಿಸುವುದು.

ಪ್ರತಿನೊ...

**4) ಜನ್ಮ ದಿನಾಂಕ :**

ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ) ದಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸುವುದಿಲ್ಲ.

**5) ಅರ್ಜಿ ಸಲ್ಲಿಸುವ ವಿಧಾನ :**

ನಿಗದಿತ ಅರ್ಜಿಯನ್ನು ಭರ್ತಿಮಾಡಿ ದಾಖಲೆಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ನೇರವಾಗಿ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಉಪ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್ ಕೊಪ್ಪಳದಲ್ಲಿ ದ್ವಿ-ಪ್ರತಿಯಲ್ಲಿ ಸಲ್ಲಿಸಲು ತಿಳಿಸಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮೂಲಕ ಸಲ್ಲಿಸಲು ಮಾತ್ರ ಅವಕಾಶ ಇರುತ್ತದೆ. ಅಂಚೆ ಮೂಲಕ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕ ಹುದ್ದೆಗೆ ನೇಮಕಾತಿ ಎಂದು ಬರೆದಿರಬೇಕು.

**6) ಅರ್ಜಿ ಶುಲ್ಕ :**

ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕ ಹುದ್ದೆಗೆ ನೇಮಕಾತಿ ಮಾಡಿಕೊಳ್ಳುತ್ತಿರುವುದರಿಂದ ಅರ್ಜಿ ಶುಲ್ಕ ಇರುವುದಿಲ್ಲ.

**7) ಜಾತಿ ಮೀಸಲಾತಿ ಪ್ರಮಾಣ ಪತ್ರ :**

ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ತಹಶೀಲ್ದಾರ ರವರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಡೆ ಪಡೆದಿರಬೇಕು.

**8) ಆಯ್ಕೆ ವಿಧಾನ :**

- ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಷ್ಟರ್ ಮೀಸಲಾತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು. ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಗ್ರಾಮ ಪಂಚಾಯತಿವಾರು ಬಂದಿರುವ ಅರ್ಜಿಗಳನ್ನು ಮೆರಿಟ್ ಆಧಾರದ ಮೇಲೆ ಖಾಲಿ ಹುದ್ದೆಗಳಿಗೆ (ರೋಸ್ಟರ್ ಬಿಂದುವಿನಂತೆ) ಸಮನಾಗಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರವಾರು ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.
- ಸರ್ಕಾರದ ಆದೇಶ ದಿನಾಂಕ:08-03-2023ರ ಕ್ರ.ಸಂ. 9 ರಲ್ಲಿ ಸಮತಲ ಮೀಸಲಾತಿ ವರ್ಗಕ್ಕೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಎದುರುಗಾಗಿ ಆ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಆ ರಿಕ್ತ ಸ್ಥಾನಗಳನ್ನು ಅದೇ ನೇರ ಮೀಸಲಾತಿಗೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿಮಾಡಲಾಗುವುದು.

ಪುತಿನೊ...

- ಗ್ರಾಮ ಪಂಚಾಯತಿಯ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ತತ್ಸಮಾನ ವಿದ್ಯಾರ್ಹತೆ ಹೊಂದಿದಲ್ಲಿ ಅವಕಾಶವಿರುವುದಿಲ್ಲ.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರತಕ್ಕದ್ದು.

9) **ಸರ್ಕಾರದ ಆದೇಶ ಸಂಖ್ಯೆ: RDPR 425 ಜಿಪಅ 2023 ದಿ:16-08-2023** ರಂತೆ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನ ರೂ.15196.72 ಹಾಗೂ ಕನಿಷ್ಠ ವೇತನದ ಜೊತೆಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

**ಸಾಮಾನ್ಯ ಸೂಚನೆಗಳು :**

- ಅಭ್ಯರ್ಥಿಯು ತನ್ನ ಇತ್ತೀಚಿನ 2 ಪಾಸ್ ಪೋರ್ಟ್ ಸೈಜಿನ ಭಾವಚಿತ್ರಗಳನ್ನು ಲಗತ್ತಿಸಬೇಕು.
- ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಪತ್ರಾಂಕಿತ ಅಧಿಕಾರಿಯ ದೃಢೀಕರಣದೊಂದಿಗೆ ದ್ವಿ-ಪ್ರತಿಯಲ್ಲಿ ಸಲ್ಲಿಸುವುದು.
- ಕನಿಷ್ಠ 3 ತಿಂಗಳ ತರಬೇತಿ ಹೊಂದಿದ ಗಣಕಯಂತ್ರ ಪ್ರಮಾಣ ಪತ್ರ ಸಲ್ಲಿಸುವುದು.
- ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದು ಕಂಡುಬಂದಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
- ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಅರ್ಜಿಯಲ್ಲಿ ನೀಡುವ ವಿಳಾಸ ಮತ್ತು ಮೋಬೈಲ್ ಸಂಖ್ಯೆಯೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ
- ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
- ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ನೌಕರಿ ಸೇವೆಯಲ್ಲಿ ಇರುವ ಅಭ್ಯರ್ಥಿಗಳು ತಮ್ಮ ಇಲಾಖೆಯ ಮುಖ್ಯಸ್ಥರ ನಿರಾಕ್ಷೇಪಣಾ ಪತ್ರವನ್ನು ಹೊಂದಿರತಕ್ಕದ್ದು.
- ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ, ರದ್ದುಗೊಳಿಸುವ ಮತ್ತು ನಿರ್ಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
- ಈಗಾಗಲೇ ಪುರುಷ ಮತ್ತು ಮಹಿಳಾ ವ್ಯಕ್ತಿಯು ಎರಡನೆಯ ಮದುವೆಯಾಗಿದ್ದರೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದಿದ್ದರೆ ಅಂತಹ ನೇಮಕಾತಿಗೆ ಅರ್ಹರಾಗುವುದಿಲ್ಲ.
- ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.

| ಅರ್ಜಿಗಳನ್ನು ಪ್ರಾರಂಭ ಮಾಡುವ ದಿನಾಂಕ | ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ |
|---|---|
| 04-03-2024 | 03-04-2024 |

ಪ್ರತಿನೊ...

- ಅರ್ಜಿಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯ ಜಿಲ್ಲಾ ಪಂಚಾಯತ್, ಕೊಪ್ಪಳದಲ್ಲಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕ ಪಂಚಾಯತಿ ಕೊಪ್ಪಳ/ ಗಂಗಾವತಿ/ಕುಷ್ಟಗಿ/ಯಲಬುರ್ಗಾ/ಕಾರಟಗಿ/ಕನಕಗಿರಿ/ಕುಕನೂರು ಹಾಗೂ ಖಾಲಿ ಇರುವ 21 ಗ್ರಾಮ ಪಂಚಾಯತಿಗಳಲ್ಲಿ ವೆಬ್‌ಸೈಟ್‌ನಲ್ಲಿ ದಿನಾಂಕ: 03-04-2024 ರ ಸಂಜೆ 5-30 ರವರೆಗೆ ಮಾತ್ರ ಲಭ್ಯವಿರುತ್ತದೆ. ಅರ್ಜಿಗಳನ್ನು ನೇರವಾಗಿ **"ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಉಪ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್, ಜಿಲ್ಲಾ ಆಡಳಿತ ಭವನ, ಹೊಸಪೇಟೆ ರೋಡ್ ಕೊಪ್ಪಳ" ಈ ವಿಳಾಸಕ್ಕೆ ಮಾತ್ರ ಸಲ್ಲಿಸತಕ್ಕದ್ದು.** ಅರ್ಜಿಗಳನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸಲು ಅವಕಾಶ ಇರುತ್ತದೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:03-04-2024 ಕಚೇರಿ ಸಯಮ ಸಾಯಂಕಾಲ 5.30 ಗಂಟೆ ಮುಗಿದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾಗುವ ಅಭ್ಯರ್ಥಿಗಳಿಗೆ ಅಂಚೆ ಹಾಗೂ ಕಛೇರಿ ದೂರವಾಣಿ ಮೂಲಕ ಮಾಹಿತಿ ನೀಡಲಾಗುವುದು. ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸತಕ್ಕದ್ದು.
- ನಿಗದಿಪಡಿಸಿದ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಹಾಗೂ ಅವರ ಹೆಸರನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.
- ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಓದಲು, ಬರೆಯಲು ಮತ್ತು ಅರ್ಥ ಮಾಡಿಕೊಳ್ಳುವ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ. ಹಾಗೂ ಸರ್ಕಾರಿ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ತೇರ್ಗಡೆಯಾಗುವುದು.
- ಹೆಚ್ಚಿನ ವಿವರಗಳಿಗಾಗಿ ಕೊಪ್ಪಳ ಜಿಲ್ಲೆಯ ವೆಬ್‌ಸೈಟ್ www.koppal.nic.in ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅವಶ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ:9480871001 ಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.
- ಅರ್ಜಿದಾರರು ಮೀಸಲಾತಿಗೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿರತಕ್ಕದ್ದು.

ಅಧ್ಯಕ್ಷರು, ಗ್ರಾಮ ಪಂಚಾಯತಿ ಗ್ರಂಥಾಲಯ
ಮೇಲ್ವಿಚಾರಕರ ನೇಮಕಾತಿ ಸಮಿತಿ ಹಾಗೂ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್, ಕೊಪ್ಪಳ.

**ಪ್ರತಿಯನ್ನು :**

1) ಮಾನ್ಯಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಜಿಲ್ಲಾ ಸೂಚನಾ ವಿಜ್ಞಾನಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ ರವರಿಗೆ www.koppal.nic.in ರ ವೆಬ್ ಸೈಟ್ ನಲ್ಲಿ ಪ್ರಕಟಿಸುವುದು.

ಪ್ರತಿನೊ...

3) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ್, ಕೊಪ್ಪಳ/ಗಂಗಾವತಿ/ಕನಕಗಿರಿ/ಕಾರಟಗಿ/ಯಲಬುರ್ಗಾ/ಕುಕನೂರು/ಕುಷ್ಟಗಿ ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

4) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ, ಬಸರಿಹಾಳ, ಜೀರಾಳ, ಮೈಲಾಪೂರ, ಮುನಿರಾಬಾದ್ ಡ್ಯಾಂ, ಅಂಟರಾಠಣ, ಗುಮಗೇರಾ, ಹಾಬಲಕಟ್ಟಿ, ಹಿರೇನಂದಿಹಾಳ, ಕೇಸೂರು, ಶಿರಗುಂಪಿ, ತುಮರಿಕೊಪ್ಪ, ಸಂಕನೂರು, ನೆಲಜೇರಿ, ಜಂಗಮರಕಲ್ಲುಡಿ, ಸಣಾಪೂರ, ಹಾಲವರ್ತಿ, ಕಲಕೇರಿ, ವಣಬಳ್ಳಾರಿ, ಬಿಳೇಕಲ್, ಬೋದೂರು ಮತ್ತು ತುಮ್ಮರಗುದ್ದಿ ಇವರಿಗೆ ನೀಡುತ್ತಾ, ಸದರಿ ನೇಮಕಾತಿ ಬಗ್ಗೆ ಗ್ರಾ.ಪಂ. ಕಾರ್ಯಾಲಯದ ಸೂಚನಾ ಫಲಕಕ್ಕೆ ಲಗತ್ತಿಸುವುದು ಹಾಗೂ ಗ್ರಾಮದಲ್ಲಿ ಸ್ವಚ್ಛ ವಾಹಿನಿಮುಖಾಂತರ ಸಾರುವುದು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾಹಿತಿ ಲಭ್ಯವಾಗುವಂತೆ ಪ್ರಚಾರ ಮಾಡುವುದು.

5) ಕಛೇರಿ ಪ್ರತಿ.

**ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ನೇಮಕಾತಿ ಅರ್ಜಿ ನಮೂನೆ**

| |
|---|
| ಇತ್ತೀಚಿನ ಭಾವಚಿತ್ರ ಪಾಸ್ ಪೋರ್ಟ್ ಸೈಜ್ ಲಗತ್ತಿಸುವುದು |

**ಇವರಿಗೆ,**
ಅಧ್ಯಕ್ಷರು, ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಸಮಿತಿ
ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್, ಕೊಪ್ಪಳ.

ಮಾನ್ಯರೇ,

ಕೊಪ್ಪಳ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ನೇಮಕಾತಿ ಈ ಕೆಳಗಿನ ಮಾಹಿತಿ ಹಾಗೂ ಅಗತ್ಯ ದಾಖಲಾತಿಯೊಂದಿಗೆ ನನ್ನ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

| | | | |
|---|---|---|---|
| ಅಭ್ಯರ್ಥಿಯ ಹೆಸರು (ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯಲ್ಲಿರುವಂತೆ) | | | |
| ತಂದೆ/ಗಂಡನ ಹೆಸರು | | | |
| ಜನ್ಮ ದಿನಾಂಕ (ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯಲ್ಲಿರುವಂತೆ) ಪ್ರಮಾಣ ಪತ್ರ ಲಗತ್ತಿಸುವುದು | | | |
| ಲಿಂಗ | | | |
| ಜಾತಿ/ವರ್ಗ ನಮೂದಿಸುವುದು (ಪ್ರಮಾಣ ಪತ್ರವನ್ನು ಲಗತ್ತಿಸುವುದು) | | | |
| ವಿವಾಹಿತ/ಅವಿವಾಹಿತ/ವಿಧವೆ | | | |
| ಅರ್ಜಿ ಸಲ್ಲಿಸಿದ ಹುದ್ದೆಯ ಹೆಸರು | | | |
| ಅರ್ಜಿ ಸಲ್ಲಿಸಿದ ಗ್ರಾಮ ಪಂಚಾಯತಿ ಹೆಸರು ಹಾಗೂ ತಾಲೂಕು | | | |
| ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಸಿರುವ ಬಗ್ಗೆ ತಹಶೀಲ್ದಾರ ರವರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ (ಆಧಾರ್ ಕಾರ್ಡ್/ವೋಟರ್ ಐಡಿ) | | | |
| ಅಭ್ಯರ್ಥಿಯ ಖಾಯಂ ವಿಳಾಸ | | | |
| ಮೊಬೈಲ್ ಸಂಖ್ಯೆ | | | |
| ಆಧಾರ್ ಕಾರ್ಡ್ ಸಂಖ್ಯೆ | | | |
| ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪ್ರಮಾಣ ಪತ್ರ ಹಾಗೂ ಪಿ.ಯು.ಸಿ. ವಿದ್ಯಾರ್ಹತೆ (ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಪಿ.ಯು.ಸಿ. ವಿದ್ಯಾರ್ಹತೆ ಪಡೆದಿರಬೇಕು) | **ಪಿ.ಯು.ಸಿ ಗೆ ನಿಗದಿಪಡಿಸಿದ ಒಟ್ಟು ಅಂಕ** | **ಪಿ.ಯು.ಸಿಯಲ್ಲಿ ಗಳಿಸಿದ ಅಂಕ** | **ಶೇಕಡ %** |
| | | | |

| | |
|---|---|
| ಅಂಗವಿಕಲ ಅಭ್ಯರ್ಥಿಯು (ಹೌದು/ಇಲ್ಲ) ಜಿಲ್ಲಾ ಸರ್ಜನ ರವರಿಂದ ಪಡೆದ ಪ್ರಮಾಣ ಪತ್ರವನ್ನು ಲಗತ್ತಿಸುವುದು. | |
| ಕನ್ನಡ ಮಾಧ್ಯಮದ ಅಭ್ಯರ್ಥಿಯು (ಹೌದು/ಇಲ್ಲ) (1 ರಿಂದ 10ನೇ ತರಗತಿ ವ್ಯಾಸಂಗ ಪ್ರಮಾಣ ಪತ್ರವನ್ನು ಮುಖ್ಯೋಪಾಧ್ಯಾಯರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣ ಪತ್ರವನ್ನು ಲಗತ್ತಿಸುವುದು) | |
| ಗ್ರಾಮೀಣ ಅಭ್ಯರ್ಥಿಯು (ಹೌದು/ಇಲ್ಲ) (1 ರಿಂದ 10ನೇ ತರಗತಿ ವ್ಯಾಸಂಗ ಪ್ರಮಾಣ ಪತ್ರವನ್ನು ಮುಖ್ಯೋಪಾಧ್ಯಾಯರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣ ಪತ್ರವನ್ನು ಲಗತ್ತಿಸುವುದು) | |
| ಗಣಕಯಂತ್ರ ಪ್ರಮಾಣ ಪತ್ರ (ಕನಿಷ್ಠ 3 ತಿಂಗಳು) | |
| ಯೋಜನಾ ನಿರಾಶ್ರಿತರು (ಹೌದು/ಇಲ್ಲ) (ಸರ್ಕಾರ ಆದೇಶ ಸಂಖ್ಯೆ: ಸಿಆಸುಇ 23 ಸೇನೆನಿ 99 ದಿನಾಂಕ:23/11/2000 ರನ್ವಯ ಯೋಜನೆಗಳಿಂದ ನಿರ್ವಶಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸುವುದು) | |
| ಮಾಜಿ ಸೈನಿಕರು (ಹೌದು/ಇಲ್ಲ) ಪ್ರಮಾಣ ಪತ್ರ ಲಗತ್ತಿಸುವುದು | |
| ತೃತೀಯ ಲಿಂಗ (ಹೌದು/ಇಲ್ಲ) (ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಲಗತ್ತಿಸುವುದು) | |

ಈ ಮೇಲ್ಕಂಡ ಮಾಹಿತಿಗಳಿಗೆ ಪೂರಕ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದು, (ಪ್ರತಿಗಳನ್ನು ಸ್ವಯಂ ಹಾಗೂ ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಲಾಗಿದೆ) ಮೇಲಿನ ಎಲ್ಲಾ ಸ್ವವಿವರ ಮಾಹಿತಿ ಸರಿಯಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಅಭ್ಯರ್ಥಿಯ ಸಹಿ ಮತ್ತು ಹೆಸರು

ದಿನಾಂಕ:

ಸ್ಥಳ :